# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನ ಪತ್ರಿಕೆ Kannada Daily

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 215 | Pages. 2 | Date: 05-07-2025, SATURDAY | RNI NO: KARKAN/2024/89601

ಸಂಪುಟ : 01 - ಸಂಚಿಕೆ : 215 - ಪುಟಗಳು : 2 - 05 ಜುಲೈ 2025 ಶನಿವಾರ | Ph: 8762954248 | ದರ : ₹1


# ಜಿಲ್ಲೆಯ ಏಳು ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲಲಿ

## ಸಂಸದರ ಗೆಲುವು ಕೊಂಡಾಡಿದ ಇಂಧನ ಸಚಿವ: ಕುಂದು ಕೊರತೆ ಸ್ವೀಕಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ಕಾಂಗ್ರೆಸ್‌ಗೆ ಪೂರಕ ವಾತಾವರಣವಿದ್ದು ಮುಂದಿನ ಚುನಾವಣೆಯಲ್ಲಿ ಏಳು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರು ಇರಬೇಕು ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಶುಕ್ರವಾರ ಕಾರ್ಯಕರ್ತರ ಕುಂದು ಕೊರತೆ ಆಲಿಸಿ ಮಾತನಾಡಿ, ಹಾಸನದಲ್ಲಿ ಲೋಕಸಭೆ ಗೆಲ್ಲುವುದೆಂದರೆ ಸುಲಭದ ಮಾತಲ್ಲ.

ಶ್ರೇಯಸ್ ಪಟೇಲ್ ಆ ಸಾಧನೆ ಮಾಡಿದ್ದಾರೆ. ಅರಸೀಕೆರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಒಬ್ಬರೇ ವಿಧಾನಸಭೆಯಲ್ಲಿ ವಿರೋಧ ಪಕ್ಷದ ಶಾಸಕರನ್ನು ಸುಮ್ಮನಾಗಿಸುವ ಸಾಮರ್ಥ್ಯ ಹೊಂದಿದ್ದಾರೆ. ಕ್ಷೇತ್ರದಲ್ಲಿ ಅವರದ್ದೇಯಾದ ಪ್ರಭಾವ ಇರುವುದರಿಂದ ಗೆಲುವಿಗೆ ಕಷ್ಟವಾಗುವುದಿಲ್ಲ. ಅದೇ ರೀತಿ ಉಳಿದ ಕ್ಷೇತ್ರಗಳಲ್ಲೂ ನಮ್ಮ ಪಕ್ಷ ಬಲಾಢ್ಯವಾಗಬೇಕೆಂದರು.

ಜಿಲ್ಲೆಯಲ್ಲಿ ಕಾಂಗ್ರೆಸ್ ಕಟ್ಟಲು ಶ್ರೀಕಂಠಯ್ಯ, ಪುಟ್ಟಸ್ವಾಮಿಗೌಡ ಮತ್ತಿತರು ಶ್ರಮ ಹಾಕಿದ್ದಾರೆ. ಯುವಕರು ಪಕ್ಷ ಸಂಘಟನೆಗೆ ಆದ್ಯತೆ ನೀಡಬೇಕು. ಚುನಾವಣೆಯಲ್ಲಿ ಸೋತ ಮಾತ್ರಕ್ಕೆ ಕ್ಷೇತ್ರ ಬಿಡಬಾರದು.



### ಮತ್ತೊಂದು ಸೋಲಾರ್ ಘಟಕ

ತುಮಕೂರು ಜಿಲ್ಲೆಯ ಪಾವಗಡದಲ್ಲಿ ಮತ್ತೊಂದು ಸೋಲಾರ್ ಘಟಕ ಆರಂಭಿಸಲು ಚಿಂತನೆ ನಡೆದಿದೆ. 2013-18ರ ವರೆಗೆ ಅಧಿಕಾರದಲ್ಲಿದ್ದ ಕಾಂಗ್ರೆಸ್ ಸರ್ಕಾರ ಅವಧಿಯಲ್ಲಿ ಪಾವಗಡದ 10 ಸಾವಿರ ಎಕರೆ ಪ್ರದೇಶದಲ್ಲಿ ಸೋಲಾರ್ ಘಟಕಕ್ಕೆ ಕ್ರಮ ಕೈಗೊಳ್ಳಲಾಗಿತ್ತು. ನಂತರ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರ ಅದಕ್ಕೆ ಸಹಕಾರ ನೀಡಲಿಲ್ಲ. ಪ್ರಸ್ತುತ ಅವಧಿಯಲ್ಲಿ ಘಟಕಕ್ಕೆ ಚಾಲನೆ ನೀಡಲಾಗಿದ್ದು ನಿರೀಕ್ಷೆಯಂತೆ ವಿದ್ಯುತ್ ಉತ್ಪಾದನೆಯಾಗುತ್ತದೆ. ಸಾಗುವಳಿಗೆ ಕಷ್ಟವಾದ ಜಮೀನನ್ನು ಸರ್ಕಾರ ಸ್ವಾಧೀನಪಡಿಸಿಕೊಂಡಿಲ್ಲ. ಬದಲಾಗಿ ಪ್ರತಿ ಎಕರೆಗೆ ವರ್ಷಕ್ಕೆ 19 ಸಾವಿರ ರೂ. ನೀಡುತ್ತಿದ್ದೆವು. ಈಗ 25 ಸಾವಿರ ರೂ. ಕೊಡಲಾಗುತ್ತಿದೆ. ಅಲ್ಲಿನ ರೈತರೇ ಭೂಮಿ ನೀಡಲು ಮುಂದೆ ಬಂದಿರುವುದರಿಂದ ಮತ್ತೆ 10 ಸಾವಿರ ಎಕರೆಯಲ್ಲಿ ಘಟಕ ಸ್ಥಾಪಿಸಲು ಚಿಂತನೆ ನಡೆದಿದೆ. ಅದರಿಂದ 2 ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುವ ಗುರಿ ಹೊಂದಲಾಗಿದೆಯೆಂದು ಹೇಳಿದರು. ಅಕ್ರಮ-ಸಕ್ರಮ ಯೋಜನೆಯಡಿ 4,500 ಅರ್ಜಿಗಳು ಬಾಕಿಯಿದ್ದು ಹಂತ ಹಂತವಾಗಿ ವಿಲೇವಾರಿ ಮಾಡಲಾಗುವುದು. ನಮ್ಮದು ಅತ್ಯಂತ ಸೂಕ್ಷ್ಮ ಇಲಾಖೆಯಾಗಿರುವುದರಿಂದ ಜವಾಬ್ದಾರಿಯುತವಾಗಿ ಕೆಲಸ ಮಾಡಬೇಕಾಗುತ್ತದೆ. ರಾಜ್ಯಾದ್ಯಂತ ಹೊಸದಾಗಿ 400 ಸಬ್ ಸ್ಟೇಷನ್ ತೆರೆಯಲು ನಿರ್ಧರಿಸಲಾಗಿದೆ ಎಂದರು.

1983ರಲ್ಲಿ ಚುನಾವಣೆ ಪ್ರವೇಶಿಸಿದ ನಾನು ಮೊದಲ ಚುನಾವಣೆಯಲ್ಲಿ ಸೋಲನುಭವಿಸಿದೆ. ಸೋತರೂ ಕ್ಷೇತ್ರದಲ್ಲೇ ಕೆಲಸ ಮಾಡಿದ್ದರಿಂದ 1985ರಲ್ಲಿ ಗೆಲುವು ಸಾಧಿಸಿದೆ.

### ಗ್ಯಾರಂಟಿಗೆ ಭಾರತ್ ಜೋಡೋ ಪ್ರೇರಣೆ

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ನಡೆಸಿದ ಭಾರತ್ ಜೋಡೋ ಯಾತ್ರೆ ಪ್ರೇರಣೆಯಾಯಿತು. ಕನ್ಯಾಕುಮಾರಿಯಿಂದ ಕಾಶ್ಮೀರದ ವರೆಗೆ ಕಾಲ್ನಡಿಗೆ ಮಾಡಿದ ರಾಹುಲ್ ಗಾಂಧಿ ಅವರು ಬಡವರಪರ ಏನಾದರೂ ಒಳ್ಳೆಯ ಕಾರ್ಯಕ್ರಮ ಘೋಷಿಸಬೇಕೆಂದರು. ಅದಕ್ಕೆ ರಾಜ್ಯದ ನಾಯಕರು ಸಹಮತ ಸೂಚಿಸಿ ಐದು ಗ್ಯಾರಂಟಿಗಳನ್ನು ಘೋಷಿಸಿದರು. ವರ್ಷಕ್ಕೆ 55 ಸಾವಿರ ಕೋಟಿ ರೂ.ಗಳನ್ನು ಗ್ಯಾರಂಟಿಗೆ ಮೀಸಲಿಡುತ್ತಿದ್ದು ಪ್ರತಿ ಕುಟುಂಬಕ್ಕೆ ತಿಂಗಳಿಗೆ 5 ರಿಂದ 6 ಸಾವಿರ ರೂ. ತಲುಪುತ್ತಿದೆ. ಹೀಗಾಗಿ ತೆರಿಗೆ ಪಾವತಿಯಲ್ಲಿ ಮಹಾರಾಷ್ಟ್ರದ ಬಳಿಕ ಎರಡನೇ ದೊಡ್ಡ ರಾಜ್ಯ ನಮ್ಮದಾಗಿದೆ. ಈ ಎಲ್ಲಾ ಸದ್ವಿಚಾರಗಳನ್ನು ಸಾರ್ವಜನಿಕರಿಗೆ ಪಕ್ಷದ ಕಾರ್ಯಕರ್ತರು ಮನವರಿಕೆ ಮಾಡಬೇಕೆಂದರು.

ಅರಸೀಕೆರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಮಾತನಾಡಿ, ಜಿಲ್ಲೆಗೆ ಅನೇಕ ಸಚಿವರು ಭೇಟಿ ನೀಡುತ್ತಾರೆಯಾದರೂ ಪ್ರವಾಸಿ ಮಂದಿರದಿಂದ ವಾಪಾಸ್ಸಾಗುತ್ತಾರೆ. ಆದರೆ ಕೆ.ಜೆ. ಜಾರ್ಜ್ ಅವರು ಪಕ್ಷದ ಕಚೇರಿಗೆ ಭೇಟಿ ನೀಡಿ ಕಾರ್ಯಕರ್ತರ ಕುಂದು ಕೊರತೆ ಆಲಿಸಿರುವುದು ಖುಷಿ ತರಿಸಿದೆ. ಈ ಪದ್ಧತಿಯನ್ನು ಎಲ್ಲಾ ಸಚಿವರು ಅಳವಡಿಸಿಕೊಳ್ಳಬೇಕೆಂದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಸಕಲೇಶಪುರ ತಾಲ್ಲೂಕಿನ ಗ್ರಾಮಾಂತರ ಭಾಗದಲ್ಲಿ ವಿದ್ಯುತ್ ಸಮಸ್ಯೆ ಹೆಚ್ಚಾಗಿದ್ದು ಅದಕ್ಕೆ ಪರಿಹಾರ ಕಲ್ಪಿಸಬೇಕು. ನಿರಂತರ ವಿದ್ಯುತ್ ಯೋಜನೆ ಅನುಷ್ಠಾನದಲ್ಲಿ ನ್ಯೂನ್ಯತೆಗಳು ಹೆಚ್ಚಿವೆಯೆಂದು ಗಮನಕ್ಕೆ ತಂದರು.

ಚುನಾವಣೆಗೆ ಹಣ ಅವಶ್ಯ ಎನ್ನುತ್ತಾರೆಯಾದರೂ ನಾನು ಇದುವರೆಗೆ ಮತಕ್ಕಾಗಿ ಯಾರಿಗೂ ದುಡ್ಡು ಕೊಟ್ಟಿಲ್ಲ. ನಮ್ಮ ಜನರು ಪ್ರಜ್ಞಾವಂತರಿದ್ದಾರೆ. ಜಾತಿ, ಮತ, ಧರ್ಮ ನೋಡದೆ ಒಳ್ಳೆಯವರನ್ನು ಗೆಲ್ಲಿಸುತ್ತಾರೆಂದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಲಕ್ಷ್ಮಣ್, ಮಾಜಿ ಶಾಸಕ ಸಿ.ಎಸ್. ಪುಟ್ಟೇಗೌಡ, ಪರಾಜಿತ ಅಭ್ಯರ್ಥಿ ಬನವಾಸೆ ರಂಗಸ್ವಾಮಿ, ಹೆಚ್.ಕೆ. ಮಹೇಶ್, ಶ್ರೀಧರ್‌ಗೌಡ, ಪಟೇಲ್ ಶಿವಪ್ಪ, ಮಲ್ಲಿಗೆವಾಳು ದ್ಯಾವಪ್ಪ, ಶಂಕರ್, ರಘು ದಾಸರಕೊಪ್ಪಲು, ಚಂದ್ರಶೇಖರ್ ಹಾಜರಿದ್ದರು.

# ಹೃದಯಾಘಾತಕ್ಕೆ ಮತ್ತೆ ಮೂವರ ಸಾವು





**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ಹೃದಯಾಘಾತ ಮರಣ ಮೃದಂಗ ಮುಂದುವರಿದಿದ್ದು, ಯುವಕ ಸೇರಿ ಮತ್ತೆ ಮೂವರು ಮೃತಪಟ್ಟಿದ್ದಾರೆ.

ನಗರದ ಹೊರವಲಯದ ಚಿಕ್ಕಕೊಂಡಗುಳ ಗ್ರಾಮದ ಮದನ್ (21) ಎಂಬ ಯುವಕ ಹೃದಯಾಘಾತದಿಂದ ಸಾವನ್ನಪ್ಪಿದ್ದಾನೆ. ತಾಲ್ಲೂಕಿನ ಚಿಟ್ನಳ್ಳಿ ಗ್ರಾಮದ ಮದನ್, ತಾಯಿ ಜೊತೆ ಚನ್ನಪಟ್ಟಣದಲ್ಲಿ ವಾಸವಿದ್ದ. 2 ದಿನಗಳಿಂದ ಚಿಕ್ಕಕೊಂಡಗುಳದ ಭಾವನ ಮನೆಗೆ ಬಂದಿದ್ದ. ದಿಢೀರ್ ಎದೆನೋವು ಕಾಣಿಸಿಕೊಂಡ ಕೆಲವೇ ಹೊತ್ತಿನಲ್ಲಿ ಮೃತಪಟ್ಟಿದ್ದಾನೆ.

ಮತ್ತೊಂದು ಪ್ರಕರಣದಲ್ಲಿ ನಗರದ ದಾಸರಕೊಪ್ಪಲಿನಲ್ಲಿ ಮಹಿಳೆಯೊಬ್ಬರು ಬಲಿಯಾಗಿದ್ದಾರೆ. ಬಿ.ಎನ್.ವಿಮಲಾ (55) ಮೃತಪಟ್ಟ ಗೃಹಿಣಿ. ಸಕಲೇಶಪುರ ತೋಟದಗದ್ದೆ ಕುಮಾರ್ ಎಂಬುವರ ಪತ್ನಿಯಾಗಿರುವ ವಿಮಲಾ ಕುಟುಂಬ ದಾಸರಕೊಪ್ಪಲಿನಲ್ಲಿ ವಾಸವಿತ್ತು. ವಿಮಲಾ ಅವರಿಗೆ ಶುಗರ್ ಇದ್ದರೂ ನಾರ್ಮಲ್ ಆಗಿದ್ದರು. ಕಳೆದ ರಾತ್ರಿ ಅದು ಏರುಪೇರಾಗಿ ಮಲಗಿದ್ದಾಗಲೇ ಹೃದಯಾಘಾತ ಸಂಭವಿಸಿ ಮನೆಯಲ್ಲೇ ಮೃತಪಟ್ಟಿದ್ದಾರೆ. ಆಲೂರು ತಾಲ್ಲೂಕಿನ ಕಲ್ಲಹಳ್ಳಿ ಗ್ರಾಮದಲ್ಲಿ ರಾಜಮ್ಮ (77) ಎಂಬ ವೃದ್ಧೆ ಜೂ.14 ರಂದೇ ಮನೆಯಲ್ಲಿ ಅಡುಗೆ ಮಾಡುತ್ತಿದ್ದಾಗಲೇ ಹೃದಯಾಘಾತದಿಂದ ಕುಸಿದು ಬಿದ್ದು ಮೃತಪಟ್ಟಿದ್ದು, ಗುರುವಾರ ಸಂಜೆ ಬೆಳಕಿಗೆ ಬಂದಿದೆ. ಇದರಿಂದ ಜಿಲ್ಲೆಯೊಂದರಲ್ಲೇ ಈ ವರೆಗೆ ಹಠಾತ್ ಸಾವು ಪ್ರಕರಣ 35ಕ್ಕೆ ಏರಿದಂತಾಗಿದೆ.

# ವಕ್ಫ್ ತಿದ್ದುಪಡಿ ಮಸೂದೆ ವಿರೋಧಿಸಿ ಪ್ರತಿಭಟನೆ




ಹಾಸನ: ಕೇಂದ್ರ ಸರ್ಕಾರ ಜಾರಿಗೊಳಿಸಿರುವ ವಕ್ಫ್ ತಿದ್ದುಪಡಿ ಮಸೂದೆ ವಿರೋಧಿಸಿ ಶುಕ್ರವಾರ ನಗರ ಸೇರಿ ಜಿಲ್ಲೆಯ ಎಲ್ಲಾ ಮಸೀದಿಗಳಲ್ಲಿ ಆಲ್ ಇಂಡಿಯಾ ಮುಸ್ಲಿಂ ಪರ್ಸನಲ್ ಲಾ ಬೋರ್ಡ್‌ನಿಂದ ಶಾಂತಿಯುತ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಲಾಯಿತು.

ಮುಸ್ಲಿಂ ಸಮುದಾಯವನ್ನು ದುರ್ಬಲಗೊಳಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ವಕ್ಫ್ ಕಾಯ್ದೆಗೆ ತಿದ್ದುಪಡಿ ತಂದಿದೆ. ವಕ್ಫ್ ಎಂಬುದು ಅಲ್ಲಾಹನಿಗೆ ಸೇರಿದ್ದು, ಮುಸ್ಲಿಮರು ಅದರ ರಕ್ಷಕರು ಎಂದು ಪೋಸ್ಟರ್ ಹಿಡಿದು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಮುಸ್ಲಿಮ್ ಸಂಘಟನೆಗಳ ಒಕ್ಕೂಟದ ಸಂಚಾಲಕ ಸಮೀರ್ ಮಾತನಾಡಿ, ಕೇಂದ್ರ ಸರ್ಕಾರದ ಅವೈಜ್ಞಾನಿಕ ನೀತಿ ವಿರುದ್ಧ ಪ್ರತಿಭಟಿಸಿ ಸುಪ್ರಿಂ ಕೋರ್ಟ್‌ಗೆ ಮನವಿ ಸಲ್ಲಿಸಲಾಗಿದೆ. ಒಂದು ಸಮುದಾಯವನ್ನು ಗುರಿಯಾಗಿಸಿ ಜಾರಿಗೊಳಿರುವ ಮಸೂದೆ ವಾಪಸ್ ಪಡೆಯಬೇಕೆಂದು ಒತ್ತಾಯಿಸಿದರು.

# ಶಾಲೆಗಳಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ ಪ್ರಕಟಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಕ್ಕಳು ಯಾವುದೇ ತೊಂದರೆಗೆ ಸಿಲುಕಿದಲ್ಲಿ ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಲು ಅನುಕೂಲವಾಗುವಂತೆ ಪ್ರತಿ ಶಾಲೆಯಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅನ್ನು ಪ್ರಕಟಿಸಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ವಿಡಿಯೋ ಸಂವಾದ ಮೂಲಕ ಫ್ರೈಡೇ ಫ್ರೆಂಡ್ ಎಂಬ ವಿನೂತನ ಕಾರ್ಯಕ್ರಮದ




ಮೂಲಕ ಕ್ಷೇತ್ರ ಶಿಕ್ಷಣಾಧಿಕಾರಿ, ಶಿಕ್ಷಕರು ಹಾಗೂ ಮಕ್ಕಳೊಂದಿಗೆ ಮಾತನಾಡಿದ ಅವರು, 18 ವರ್ಷದೊಳಗಿನವರೆಲ್ಲರೂ ಮಕ್ಕಳೆ ಇವರ ರಕ್ಷಣೆಗೆ ಮೊದಲ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಪ್ರಕೃತಿ ದತ್ತವಾಗಿ ದೈಹಿಕವಾಗಿ ಬದಲಾವಣೆ ಹಾಗೂ ಋತು ಚಕ್ರದ ಬಗ್ಗೆ ಮಕ್ಕಳಿಗೆ ತಿಳವಳಿಕೆ ನೀಡಬೇಕು. ಪ್ರತಿಯೊಬ್ಬರು ವಿದ್ಯಾಭ್ಯಾಸ ಮುಗಿಸಿದ ನಂತರ ಕೆಲಸದಲ್ಲಿ ತೊಡಗಿಕೊಂಡು ಸ್ವಾವಲಂಬಿ ಬದುಕು ನಡೆಸುವ ಮೂಲಕ ದೇಶಕ್ಕೆ ತಮ್ಮದೆ ಆದ ಕೊಡುಗೆ ನೀಡಬೇಕು ಎಂದರು.

ಮಕ್ಕಳು ಮಾನಸಿಕ ಮತ್ತು ದೈಹಿಕ ಬೆಳವಣಿಗೆಗೆ ಸಹಾಯವಾಗುವಂತೆ ಪಾಠದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸಬೇಕು ಎಂದರು.

ಮಕ್ಕಳಿಗೆ ಪ್ರಾಥಮಿಕ ಹಂತದಿಂದಲೇ ಶಿಸ್ತು, ಸಮಯ ಪರಿಪಾಲನೆ ಬಗ್ಗೆ ಮನವರಿಕೆ ಮಾಡಿಕೊಡಬೇಕು. ಮಕ್ಕಳು ಚಿಕ್ಕ ವಯಸ್ಸಿನಿಂದಲೆ ಓದುವ ಹವ್ಯಾಸ ಬೆಳೆಸಿಕೊಳ್ಳಿ ಎಂದರು. ಮಕ್ಕಳಿಗೆ ಕಾಗುಣಿತ ಕಡ್ಡಾಯವಾಗಿ ಕಲಿಸಬೇಕು ಪ್ರತಿ ಮಂಗಳವಾರ ಉಕ್ತಲೇಖನ ಪದ ಬರೆಸಬೇಕು ಶಾಲೆಯಲ್ಲಿ ಪ್ರತಿ ಶನಿವಾರ ಮಕ್ಕಳು ಬಾಯಿತೆರೆದು ಗಟ್ಟಿಯಾಗಿ ಓದಬೇಕು ಎಂದು ಹೇಳಿದರು.

ಪರೀಕ್ಷೆಯಲ್ಲಿ ಫೇಲಾಗುವುದೇ ಭಯದಿಂದ ಕಲಿತಿರುವುದನ್ನು ಬರೆಯುವುದಿಲ್ಲ ಅದನ್ನು ಸಹ ಮರೆಯುತ್ತಾರೆ ಈ ನಿಟ್ಟಿನಲ್ಲಿ ಮಕ್ಕಳಿಗೆ ಪರೀಕ್ಷಾ ಭಯ ನಿವಾರಣೆ ಮಾಡಿ ಆತ್ಮಸ್ಥೈರ್ಯ ತುಂಬಿ ಓದಲು ಹುರಿದುಂಬಿಸಿ ಎಂದು ತಿಳಿಸಿದರಲ್ಲದೆ ಪೋಷಕರ ಸಭೆ ನಡೆಸುವಂತೆ ಸೂಚಿಸಿದರು.

ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ನವೆಂಬರ್ ಒಳಗೆ ಪೂರ್ಣಪ್ರಮಾಣದಲ್ಲಿ ಪಾಠವನ್ನು ಮುಗಿಸಿ ಪುನರಾವರ್ತನೆ ಪ್ರಾರಂಭಿಸಿ, ಟಿ.ವಿ. ನೋಡಬಾರದು ಜೊತೆಗೆ ಮೊಬೈಲ್ ಬಳಕೆ ಮಾಡದಂತೆ ಎಚ್ಚರ ವಹಿಸಬೇಕು. 18 ವರ್ಷದ ಒಳಗಿನ ಯಾವುದೇ ಮಕ್ಕಳು ಸಾಮಾಜಿಕ ಜಾಲತಾಣಗಳ ಖಾತೆ ಹೊಂದಿರುವಂತಿಲ್ಲ ಎಂದು ತಿಳಿಸಿದರು.

# ಸಾರ್ವಜನಿಕರ ಸಮಸ್ಯೆಗೆ ಸಕಾರಾತ್ಮಕವಾಗಿ ಸ್ಪಂದಿಸಿ

## ಅಧಿಕಾರಿಗಳಿಗೆ ಸಚಿವ ಕೆ.ಜೆ. ಜಾರ್ಜ್ ಸೂಚನೆ | ಪ್ರಗತಿ ಪರಿಶೀಲನಾ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಧಿಕಾರಿಗಳು ಸಾರ್ವಜನಿಕರಿಗೆ ಸ್ಪಂದಿಸಿ ಸೇವಾ ಮನೋಭಾವದಿಂದ ಕರ್ತವ್ಯ ನಿರ್ವಹಿಸಿ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲೆಯ ಎಲ್ಲಾ ಚುನಾಯಿತ ಜನ ಪ್ರತಿನಿಧಿಗಳೊಂದಿಗೆ ಇಂಧನ ಇಲಾಖೆಗೆ ಸಂಬಂಧಪಟ್ಟಂತೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ರೈತರಿಗೆ ಅವಶ್ಯವಿರುವ ಕಡೆಗಳಲ್ಲಿ ಕುಡಿಯುವ ನೀರಿಗೆ ಟ್ರಾನ್ಸ್‌ಫಾರ್ಮರ್ ಅಳವಡಿಸಿ ಎಂದು ತಿಳಿಸಿದರು.

### 2500 ಮೆಗಾ ವ್ಯಾಟ್ ವಿದ್ಯುತ್‌ಗೆ ಟೆಂಡರ್

ರಾಜ್ಯದಲ್ಲಿ 2500 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲು ಟೆಂಡರ್ ಆಹ್ವಾನಿಸಲಾಗಿದ್ದು, ಅದಕ್ಕಾಗಿ ಖಾಸಗಿಯವರು 10 ಸಾವಿರ ಕೋಟಿ ರೂ. ಹೂಡಲು ಸಿದ್ಧರಿದ್ದಾರೆ. ಖಾಸಗಿಯವರು ವಿದ್ಯುತ್ ಉತ್ಪಾದನೆ ಮಾಡಲಿದ್ದಾರೆ. ಹಾಗೆಯೇ ದೊಡ್ಡ ದೊಡ್ಡ ಸಬ್ ಸ್ಟೇಷನ್ ಸಹ ಆಗಲಿವೆ. ನಾವು ಅವರಿಂದ ಯೂನಿಟ್‌ಗೆ 3.17 ರೂ. ಹಾಗೂ 2.75 ಪೈಸೆ ನೀಡಿ ಖರೀದಿ ಮಾಡುತ್ತೇವೆ ಎಂದರು.

ಇಂಧನ ಇಲಾಖೆಯಲ್ಲಿ ಎಲ್ಲ ಕೆಲಸಗಳು ಸಮರ್ಪಕವಾಗಿ ನಡೆಯುತ್ತಿವೆ. ಯಾವುದೇ ಆರ್ಥಿಕ ಸಮಸ್ಯೆ ಇಲ್ಲ. ಕಳೆದ ವರ್ಷ 1,500 ಎಂಜಿನಿಯರ್‌ಗಳನ್ನು ನೇಮಕ ಮಾಡಿಕೊಳ್ಳಲಾಗಿದ್ದು, ಅವರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಈ ವರ್ಷ 3 ಸಾವಿರ ಲೈನ್‌ಮನ್‌ಗಳ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಅಧಿಕಾರಿಗಳು ಎಲ್ಲಿಗೆ ಎಷ್ಟು ಟಿಸಿ ಬೇಕು ಎಂಬುದನ್ನು ಪರಿಶೀಲಿಸಿ ನಂತರ ಹಂಚಿಕೆ ಮಾಡಲಿದ್ದಾರೆ. ರೈತರೂ ಸಹ ಅಕ್ರಮ-ಸಕ್ರಮ ಮಾಡಿಕೊಳ್ಳಲು ಹಿಂದೇಟು ಹಾಕುತ್ತಿದ್ದಾರೆ. ಸರಿಯಾಗಿ ಹಣ ಕಟ್ಟುತ್ತಿಲ್ಲ. ಸರ್ಕಾರವೇ ಕೆಲ ದಿನಗಳ ಹಿಂದೆ ನಾಲ್ಕೂವರೆ ಲಕ್ಷ ಪಂಪ್‌ಸೆಟ್‌ಗಳನ್ನು ಸಕ್ರಮ ಮಾಡಿದೆ ಎಂದರು.

### ಮಲೆನಾಡು ಸಮಸ್ಯೆ ಗಮನದಲ್ಲಿದೆ




ಮಲೆನಾಡು ಭಾಗದಲ್ಲಿ ಕರೆಂಟ್ ಸ್ಪರ್ಶದಿಂದ ಕಾಡಾನೆ ದುರಂತ ಸಾವಿಗೀಡಾಗುತ್ತಿರುವ ಬಗ್ಗೆ, ಎಲ್ಲೆಲ್ಲಿ ವಿದ್ಯುತ್ ತಂತಿಗಳು ಜೋತು ಬಿದ್ದಿವೆಯೋ ಅವುಗಳನ್ನು ಕೂಡಲೇ ಸರಿಪಡಿಸಿ ವನ್ಯ ಜೀವಿಗಳಿಗೆ ತಾಗದಂತೆ ಸಂಬಂಧಪಟ್ಟವರಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ರೈತರ ಪಂಪ್ ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಸಲು ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗುತ್ತಿದೆ. ರಾಜ್ಯದಲ್ಲಿ ಇದ್ದ 4 ಲಕ್ಷ ಅಕ್ರಮ ಪಂಪ್‌ಸೆಟ್‌ಗಳ ಪೈಕಿ 3 ಲಕ್ಷ ಪಂಪ್ ಸೆಟ್ ಗಳನ್ನು ಸಕ್ರಮಗೊಳಿಸಲಾಗಿದೆ ಎಂದು ಮಾಹಿತಿ ನೀಡಿದರು.

ಫೀಡರ್‌ಗಳಿಂದ 500 ಮೀಟರ್ ಒಳಗಿನ ಪಂಪ್‌ಸೆಟ್‌ಗಳಿಗೆ ಇಲಾಖೆಯೇ ಟ್ರಾನ್ಸ್‌ಫಾರ್ಮರ್ ಒದಗಿಸಲಿದೆ. 500 ಮೀಟರ್‌ನಿಂದ ಹೊರಗಿನ ಪಂಪ್ ಸೆಟ್‌ಗಳಿಗೆ ಕುಸುಮ್-ಬಿ ಯೋಜನೆಯಡಿ ಸೋಲಾರ್ ಪಂಪ್ ಸೆಟ್‌ಗಳನ್ನು ಒದಗಿಸಲಾಗುತ್ತದೆ. ಅದೇ ರೀತಿ ರೈತರಿಗೆ ಹಗಲು ವೇಳೆ ಸಮರ್ಪಕ ವಿದ್ಯುತ್ ಪೂರೈಕೆಗೆ ಕುಸುಮ್-ಸಿ ಯೋಜನೆಯಡಿ ಫೀಡರ್ ಸೌರೀಕರಣ ಮಾಡಲಾಗುತ್ತಿದೆ ಎಂದರು.

ಸರ್ಕಾರ ಕುಸುಮ್-ಸಿ ಯೋಜನೆಯಡಿ ಕೃಷಿ ಪಂಪ್ ಸೆಟ್‌ಗಳ ಫೀಡರ್ ಸೋಲರೈಸೇಷನ್ ಮೂಲಕ 2,400 ಮೆಗಾವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದನೆ ಗುರಿ ಹಾಕಿಕೊಂಡಿದೆ. ಇತ್ತೀಚೆಗೆ ಗೌರಿಬಿದನೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕುಸುಮ್-ಸಿ ಯೋನೆಯಡಿ ಸ್ಥಾಪಿಸಿರುವ ಸೋಲಾರ್ ವಿದ್ಯುತ್ ಘಟಕವನ್ನು ಉದ್ಘಾಟನೆ ಮಾಡಿದ್ದಾರೆ ಎಂದರು.

ಈಗಾಗಲೇ ಸುಮಾರು 200 ಮೆಗಾ ವ್ಯಾಟ್ ಸಾಮರ್ಥ್ಯದ ಸೋಲಾರ್ ಘಟಕಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದು, ಇನ್ನು ಕೆಲವೇ ತಿಂಗಳುಗಳಲ್ಲಿ 93 ಸ್ಥಳಗಳಲ್ಲಿ 545 ಮೆ.ವ್ಯಾ. ಸಾಮರ್ಥ್ಯದ ಸೋಲಾರ್ ಘಟಕಗಳು ಚಾಲನೆಗೊಳ್ಳಲಿವೆ. ಇದರಿಂದ ರೈತರಿಗೆ ರೈತರಿಗೆ ಹಗಲು ವೇಳೆ ಸಮರ್ಪಕ ವಿದ್ಯುತ್ ಪೂರೈಸಲು ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಒಂದು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಗೆ 4 ಎಕರೆ ಭೂಮಿ ಅಗತ್ಯವಿದೆ. ಸರ್ಕಾರಿ ಭೂಮಿ ಲಭ್ಯವಿದ್ದರೆ ಅದನ್ನು ಉಚಿತವಾಗಿ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆದೇಶಿಸಿದ್ದಾರೆ. ಆದರೆ, ಆ ಭೂಮಿಗೆ ಪ್ರತಿ ಎಕರೆಗೆ 25 ಸಾವಿರ ರೂ. ಅನ್ನು ಖಾಸಗಿ ವಿದ್ಯುತ್ ಉತ್ಪಾದಕರು ಪಾವತಿಸಬೇಕು. ಆ ಮೊತ್ತವನ್ನು ಜಿಲ್ಲಾಧಿಕಾರಿಗಳ ಬಳಿ ಇಟ್ಟು ಉಪ ಕೇಂದ್ರ ಇರುವ ಗ್ರಾಮದ ಸರ್ಕಾರಿ ಶಾಲೆ, ಅಂಗನವಾಡಿಗಳ ಅಭಿವೃದ್ಧಿಗೆ ಬಳಸಿಕೊಳ್ಳಲಾಗುವುದು. ಖಾಸಗಿ ಭೂಮಿಯಾಗಿದ್ದರೆ, ವಿದ್ಯುತ್ ಉತ್ಪಾದನೆ ಗುತ್ತಿಗೆ ಪಡೆದ ಡೆವಲಪರ್‌ಗಳು ಗುತ್ತಿಗೆಗೆ ತೆಗೆದುಕೊಂಡು, ಭೂಮಾಲೀಕರಿಗೆ ಎಕರೆಗೆ ಕನಿಷ್ಠ 25,000 ರೂ. ಪರಿಹಾರ ನೀಡುತ್ತಾರೆ ಎಂದು ಹೇಳಿದರು.

ಶಾಸಕ ಕೆ.ಎಂ. ಶಿವಲಿಂಗೇಗೌಡ ಮಾತನಾಡಿ, ರೈತರು ಜಮೀನಿನ ಬಳಿ ಮನೆ ನಿರ್ಮಾಣ ಮಾಡಿಕೊಂಡಿದ್ದಾರೆ. ಅವರಿಗೆ ರಾತ್ರಿ ವೇಳೆಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಅಗತ್ಯ ಕ್ರಮವಹಿಸುವಂತೆ ತಿಳಿಸಿದರು.

ಅನಧಿಕೃತವಾಗಿ ಕೆಲವು ಮನೆಗಳಿಗೆ ಸಂಪರ್ಕವನ್ನು ಪಡೆದಿರುತ್ತಾರೆ ಅಂತಹ ಮನೆಗಳಲ್ಲಿ ವಿದ್ಯುತ್ ಅಪಘಾತಗಳು ಹೆಚ್ಚಾಗುತ್ತಿವೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

### ವಾಹನ ವ್ಯವಸ್ಥೆಗೆ ಮನವಿ

ಶಾಸಕ ಎ.ಮಂಜು ಮಾತನಾಡಿ, ಜಿಲ್ಲೆಯಲ್ಲಿ ಇಲಾಖೆಯಿಂದ ಉತ್ತಮ ಕೆಲಸ ಆಗುತ್ತಿದ್ದರೂ, ಕೆಲವೊಮ್ಮೆ ಅಧಿಕಾರಿಗಳು ಸಂಪರ್ಕಕ್ಕೆ ಸಿಗುವುದಿಲ್ಲ. ಇದರಿಂದ ಸ್ಥಳೀಯ ರೈತರು, ಸಾರ್ವಜನಿಕರು ಸಮಸ್ಯೆ ಎದುರಿಸುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದರು.

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಶ್ರೀನಿವಾಸಪುರಕ್ಕೆ ಹೊಸ ಸಬ್ ಸ್ಟೇಷನ್ ನೀಡುವಂತೆ, ಶ್ರವಣಬೆಳಗೊಳದಲ್ಲಿ ಯು.ಜಿ. ಕೇಬಲ್ ಅಳವಡಿಕೆಗೆ ಸಚಿವರಲ್ಲಿ ಮನವಿ ಮಾಡಿದರು.

ಶಾಸಕ ಹೆಚ್.ಕೆ. ಸುರೇಶ್ ಮಾತನಾಡಿ, ಗಂಗಾ ಕಲ್ಯಾಣ ಯೋಜನೆಯಡಿ ಕೊರೆದಿರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಮಲೆನಾಡು ಭಾಗದಲ್ಲಿ ಆನೆಗಳ ಹಾವಳಿಯಿಂದ ಜನರಿಗೆ ತೊಂದರೆ ಆಗದಂತೆ ಸಿಂಗಲ್ ಫೇಸ್‌ನಲ್ಲಿ ನಿರಂತರವಾಗಿ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಮನವಿ ಮಾಡಿದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ರೈತರು ತಮ್ಮ ವಾಹನದಲ್ಲಿ ಟ್ರಾನ್ಸ್‌ಫಾರ್ಮರ್ ತೆಗೆದುಕೊಂಡು ಹೋಗುತ್ತಿದ್ದಾರೆ. ಇಲಾಖೆ ವಾಹನದಲ್ಲಿ ತೆಗೆದುಕೊಂಡು ಹೋಗಲು ಅಧಿಕಾರಿಗಳು ಕ್ರಮವಹಿಸಿ ಎಂದು ತಿಳಿಸಿದರು.

ಆಲೂರು ತಾಲ್ಲೂಕಿನಲ್ಲಿ 330 ಮನೆಗಳಿಗೆ ಹಾಗೂ ಸಕಲೇಶಪುರ ತಾಲ್ಲೂಕಿನಲ್ಲಿ 250 ಮನೆಗಳಿಗೆ ವಿದ್ಯುತ್ ಸಂಪರ್ಕವಿಲ್ಲ ಈ ಮನೆಗಳಲ್ಲಿ ಬಡಜನತೆ ವಾಸ ಮಾಡುತ್ತಿದ್ದಾರೆ. ಇಲಾಖೆ ವತಿಯಿಂದ ಕಂಬಗಳನ್ನು ಅಳವಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಮನವಿ ಮಾಡಿದರು.

ಶಾಸಕ ಹೆಚ್.ಪಿ. ಸ್ವರೂಪ್ ಮಾತನಾಡಿ, ಹಾಸನ ನಗರಕ್ಕೆ ಒಂದು ಸಬ್ ಸ್ಟೇಷನ್ ಅಗತ್ಯವಿದೆ. ಈ ನಿಟ್ಟಿನಲ್ಲಿ ಹಿಮ್ಸ್ ಆವರಣದಲ್ಲಿ ಸ್ಥಳಾವಕಾಶ ಕಲ್ಪಿಸಿ, ಸಾಲಗಾಮೆ ಹೋಬಳಿಗೆ ಹೊಂದಿಕೊಂಡಂತೆ ಬಡಾವಣೆಗಳು ಬೆಳೆಯುತ್ತಿರುವುದರಿಂದ ಅಲ್ಲಿಯೂ ಕೂಡ ಸಬ್ ಸ್ಟೇಷನ್ ಬೇಕು ಎಂದು ವಿನಂತಿ ಮಾಡಿದರು.

ಎಸ್ ಎಂ.ಕೃಷ್ಣ ನಗರದಲ್ಲಿ ಕಳೆದ ಏಳು ವರ್ಷಗಳಿಂದ ತಾತ್ಕಾಲಿಕವಾಗಿ ವಿದ್ಯುತ್ ಸಂಪರ್ಕ ನೀಡಲಾಗಿದೆ ಎಂದು ಸಚಿವರ ಗಮನಕ್ಕೆ ತಂದರು.

ಸಂಸದ ಶ್ರೇಯಸ್ ಪಟೇಲ್, ಇಂಧನ ಇಲಾಖೆಯ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ ಮತ್ತಿತರರು ಉಪಸ್ಥಿತರಿದ್ದರು.

# ಶುಂಠಿ ಬೆಳೆಗೆ ಕಾಡುತ್ತಿದೆ ಪೈರಿಕ್ಯುಲೇರಿಯಾ, ಕೊಳೆ ರೋಗ

## ನಿರಂತರ ಮಳೆಯಿಂದ ರೋಗ ಉಲ್ಬಣ | ಆತಂಕದಲ್ಲಿ ರೈತರು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾದ್ಯಂತ ಶುಂಠಿ ಬೆಳೆಗೆ ಪೈರಿಕ್ಯುಲೇರಿಯಾ ಎಂಬ ಹೊಸ ಶಿಲೀಂದ್ರ ರೋಗ ಕಾಣಿಸಿಕೊಂಡಿದ್ದು ರೈತರು ನಷ್ಟದ ಸುಳಿಗೆ ಸಿಲುಕಿದ್ದಾರೆ.

ನಿರಂತರ ಮಳೆಯಿಂದ ಶುಂಠಿಗೆ ಕೊಳೆ ರೋಗ ಸಾಮಾನ್ಯವಾಗಿದೆ. ಅದರ ಜೊತೆಗೆ ಕಳೆದ ಬಾರಿ ಕೊಡಗು ಜಿಲ್ಲೆಯಲ್ಲಿ ಕಾಣಿಸಿಕೊಂಡ ಪೈರಿಕ್ಯುಲೇರಿಯಾ ಎಂಬ ಶಿಲೀಂದ್ರ ರೋಗ ಜಿಲ್ಲೆಯ ಬೇಲೂರು ವ್ಯಾಪ್ತಿಯಲ್ಲಿ ಗೋಚರಿಸಿರುವುದು ಆತಂಕಕ್ಕೆ ಎಡೆಮಾಡಿಕೊಟ್ಟಿದೆ. ಇದು ಅತ್ಯಂತ ಪ್ರಭಾವಶಾಲಿ ರೋಗವಾಗಿದ್ದು ಕೇವಲ 24 ಗಂಟೆಯಲ್ಲಿ 1 ಎಕರೆ ಬೆಳೆಯನ್ನು ನಾಶಪಡಿಸುವ ಸಾಮರ್ಥ್ಯ ಹೊಂದಿದೆ. ಹೀಗಾಗಿ ರೈತರು ಕ್ರಿಮಿನಾಶಕ ಸಿಂಪಡಣೆಗೆ ಮುತುವರ್ಜಿ ವಹಿಸುತ್ತಿದ್ದಾರೆ. ಯಾವಾಗಲೂ ಮಳೆ ಸುರಿಯುತ್ತಿರುವುದರಿಂದ ಔಷಧ ಸಿಂಪಡಣೆಗೆ ತೊಡಕಾಗಿದೆ. 6.50 ಸಾವಿರ ಹೆಕ್ಟೇರ್‌ನಲ್ಲಿ ಬಿತ್ತನೆ:

ಜಿಲ್ಲಾದ್ಯಂತ 6.50 ಸಾವಿರ ಹೆಕ್ಟೇರ್‌ನಲ್ಲಿ ಈ ವರ್ಷ ಶುಂಠಿ ಬೆಳೆ ಮಾಡಲಾಗಿದೆ. ಬೇಲೂರು, ಹಾಸನ, ಆಲೂರು ಮತ್ತು ಅರಕಲಗೂಡಿನ ಸ್ವಲ್ಪ ಭಾಗದಲ್ಲಿ ಬೆಳೆ ಕೈಗೊಳ್ಳಲಾಗಿದೆ. ಬೇಲೂರಿನಲ್ಲಿ ಕೊಳೆ ರೋಗದ ಜೊತೆಗೆ ಹೊಸ ಶಿಲೀಂದ್ರವು ಹರಡುತ್ತಿರುವುದರಿಂದ ಇತರ ತಾಲ್ಲೂಕಿನ ಆತಂಕಕ್ಕೆ ಒಳಗಾಗಿದ್ದಾರೆ. ಸಮಸ್ಯೆ ಇಷ್ಟೆಲ್ಲ ಬಿಗಡಾಯಿಸಿದರೂ ತೋಟಗಾರಿಕೆ ಇಲಾಖೆ ಯಾವ ಸಮೀಕ್ಷೆ ಕೈಗೊಂಡಿಲ್ಲವೆಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮೆಕ್ಕೆ ಜೋಳ ಬೆಳೆಗೆ ಬಿಳಿ ಸುಳಿ ರೋಗ ತಗುಲಿದ್ದರಿಂದ ನಷ್ಟ ಅನುಭವಿಸಿದ್ದ ರೈತರಿಗೆ ಶುಂಠಿಯು ಕೈಕೊಡುವ ಭೀತಿ ಕಾಡುತ್ತಿದೆ.



ಕಳೆದ ವರ್ಷ ಕೊಡಗು ಜಿಲ್ಲೆಯಲ್ಲಿ ಕಂಡುಬಂದ ಹೊಸ ಶಿಲೀಂದ್ರ ರೋಗವನ್ನು ಭಾರತೀಯ ಸಂಬಾರ ಬೆಳೆಗಳ ಸಂಶೋಧನಾ ಸಂಸ್ಥೆ (ಐಸಿಎಆರ್) ದೃಢಪಡಿಸಿದೆ. ಈ ರೋಗವು ಪೆರಿಕ್ಯುಲೇರಿಯಾ ಎಂಬ ಶಿಲೀಂದ್ರದಿಂದ ಹರಡುತ್ತದೆ. ರೋಗ ತಗುಲಿದ ಶುಂಠಿ ಗಿಡದ ಎಲೆಗಳು ಹಳದಿ ಬಣ್ಣಕ್ಕೆ ತಿರುಗುತ್ತವೆ. ಆರಂಭಿಕ ಹಂತದಲ್ಲಿ ಕಪ್ಪು ಅಥವಾ ಹಸಿರು ಬಣ್ಣದ ಚುಕ್ಕೆಗಳು ಕಾಣಿಸುತ್ತವೆ. ಕೆಲವೇ ಗಂಟೆಗಳಲ್ಲಿ ಇಡೀ ಹೊಲವನ್ನು ಆವರಿಸಿಕೊಳ್ಳುವ ಸಾಧ್ಯತೆಯಿದ್ದು, ಎಲೆ ಮತ್ತು ಕಾಂಡ ಒಣಗುವಿಕೆಗೆ ಕಾರಣವಾಗುತ್ತದೆ. ಇದು ಗಿಡಗಳ ಬೆಳವಣಿಗೆ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವುದರಿಂದ ನಷ್ಟ ಅನುಭವಿಸುವಂತಾಗಿದೆ. ಶಿಲೀಂದ್ರ ರೋಗ ಹರಡಲು ಅತಿಯಾದ ಮಳೆ ಹಾಗು ಮಂಜಿನ ವಾತಾವರಣವೇ ಕಾರಣ. ಜಿಲ್ಲೆಯಲ್ಲಿ ಕಳೆದ ಒಂದು ತಿಂಗಳಿಂದ ಜೋರು ಮಳೆ ಹಾಗು ಮೋಡ ಮುಸುಕಿದ ವಾತಾವರಣ ಸೃಷ್ಟಿಯಾಗಿರುವುದರಿಂದ ಬೆಳೆ ಕೈತಪ್ಪುವ ಆತಂಕ ಕಾಡುತ್ತಿದೆ.

### ಪರ್ಯಾಯ ಬೆಳೆ ಅನಿವಾರ್ಯ

ಕೇರಳದಲ್ಲಿ ವ್ಯಾಪಕವಾಗಿ ಬೆಳೆಯಲಾಗುತ್ತಿದ್ದ ಶುಂಠಿ ಕರ್ನಾಟಕಕ್ಕೆ ಕಾಲಿಟ್ಟು ದಶಕಗಳೇ ಕಳೆದಿವೆ. ಕೊಡಗು, ಹಾಸನ, ಮೈಸೂರು, ಚಾಮರಾಜನಗರ ಜಿಲ್ಲೆಯಲ್ಲಿ ಶುಂಠಿಯನ್ನು ಹೆಚ್ಚಾಗಿ ಬೆಳೆಯಲಾಗುತ್ತದೆ. ಇತ್ತೀಚೆಗೆ ಶುಂಠಿಗೆ ರೋಗಬಾಧೆ, ಬೆಲೆ ಕುಸಿತ ಇನ್ನಿತರ ಸಮಸ್ಯೆಗಳು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದು ರೈತರು ಸಾಲದ ಸುಳಿಗೆ ಸಿಲುಕುವಂತಾಗಿದೆ. ಹೀಗಾಗಿ ಪರ್ಯಾಯ ಬೆಳೆಯತ್ತ ರೈತರು ಗಮನ ಹರಿಸುತ್ತಿದ್ದಾರೆ. ಲಾಭದಾಸೆಯಿಂದ ಸಾಂಪ್ರದಾಯಿಕ ಬೆಳೆಯನ್ನು ಈ ವರ್ಷ ಕೈಗೊಳ್ಳಲಾಗಿದೆಯಾದರೂ ವಿಪರೀತ ಮಳೆ ಹಿನ್ನೆಲೆಯಲ್ಲಿ ಅದು ಕೈಹಿಡಿಯುವ ಸಾಧ್ಯತೆ ಕಡಿಮೆ ಎನ್ನಲಾಗುತ್ತಿದೆ.

> ಜಿಲ್ಲೆಯ ಬೇಲೂರು, ಹಾಸನ ಭಾಗದಲ್ಲಿ ಅಧಿಕ ಪ್ರಮಾಣದಲ್ಲಿ ಶುಂಠಿ ಬೆಳೆ ಕೈಗೊಳ್ಳಲಾಗಿದೆ. ನಿರಂತರ ಮಳೆಯಾಗುತ್ತಿರುವುದರಿಂದ ಕೊಳೆ ರೋಗ ತಗುಲುವ ಸಾಧ್ಯತೆಯಿದೆ. ಈ ಬಗ್ಗೆ ಇಲ್ಲಿತನಕ ಯಾವ ದೂರುಗಳು ಕೇಳಿಬಂದಿಲ್ಲ. ಹೆಚ್ಚಿನ ಪ್ರಮಾಣದಲ್ಲಿ ಬೆಳೆ ಹಾನಿಗೀಡಾದರೆ ಎನ್‌ಡಿಆರ್‌ಎಫ್ ಅಡಿಯಲ್ಲಿ ಪರಿಹಾರ ನೀಡಲಾಗುವುದು.
>
> **- ಮಂಗಳಾ, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ**

### ನಿಯಂತ್ರಣ ಕ್ರಮಗಳು

ಪೈರಿಕ್ಯುಲೇರಿಯಾ ರೋಗ ಹರಡುವಿಕೆ ತಡೆಯಬೇಕೆಂದರೆ ಪ್ರೊಪಿಕೊನಜೊಲ್ ಅನ್ನು 1 ಎಂಎಲ್ ಅಥವಾ ಕಾರ್ಬೆಂಡಜಿಮ್ ಮತ್ತು ಮ್ಯಾಂಕೋಜೆಬ್ ಸಂಯೋಜನೆಯನ್ನು 2 ಗ್ರಾಂ ಅನುಪಾತದಲ್ಲಿ ನೀರಿನೊಟ್ಟಿಗೆ ಸಿಂಪಡಿಸಬೇಕು. ಬೀಜದ ಗೆಡ್ಡೆಗಳನ್ನು ಶೇಖರಿಸುವ ಮೊದಲು ಈ ಶಿಲೀಂದ್ರ ನಾಶಕದಲ್ಲಿ 30 ನಿಮಿಷಗಳ ಕಾಲ ಅದ್ದಿ ಚೆನ್ನಾಗಿ ಗಾಳಿ ಇರುವ ಸ್ಥಳದಲ್ಲಿ ಶೇಖರಿಸಬೇಕು. ನಾಟಿ ಮಾಡಿದ ನಾಲ್ಕು ತಿಂಗಳ ನಂತರ ಸಿಂಪಡಿಸಬೇಕು. ಯಾವುದಾದರು ಗಿಡದ ಎಲೆ ಹಳದಿ ಬಣ್ಣಕ್ಕೆ ತಿರುಗಿದ್ದರೆ ಅದನ್ನು ಬೇರು ಸಮೇತ ಕಿತ್ತೆಸೆಯಬೇಕೆಂದು ತಜ್ಞರು ಶಿಫಾರಸು ಮಾಡುತ್ತಾರೆ.

# ಕಾಂಗ್ರೆಸ್ ಪದಾಧಿಕಾರಿಗಳಿಗೆ ಅಭಿನಂದನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ಅರಕಲಗೂಡು ವಿಧಾನ ಸಭಾ ಕ್ಷೇತ್ರದ ಹಳ್ಳಿಮೈಸೂರು ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗಕ್ಕೆ ನೂತನವಾಗಿ ನೇಮಕ ಆಗಿರುವ ವಿವಿಧ ಪದಾಧಿಕಾರಿಗಳಿಗೆ ಅಭಿನಂದನಾ ಸಮಾರಂಭ ಹಳ್ಳಿಮೈಸೂರು ಗ್ರಾಮದ ಸೀಗೆತಾಳಮ್ಮ ದೇವಸ್ಥಾನ ಆವರಣದಲ್ಲಿ ನಡೆಯಿತು.



ಹಳ್ಳಿಮೈಸೂರು ಭಾಗದಲ್ಲಿ ಕಾಂಗ್ರೆಸ್ ಪಕ್ಷವು ಸಂಘಟನೆಯನ್ನು ಬಲಪಡಿಸಲು ಹಾಗೂ ಮತದಾರರೊಂದಿಗೆ ಸಂಪರ್ಕವನ್ನು ಗಟ್ಟಿಗೊಳಿಸಲು ಹಳ್ಳಿ ಮೈಸೂರು ಬ್ಲಾಕ್ ಕಾಂಗ್ರೆಸ್ ಹಿಂದುಳಿದ ವರ್ಗಗಳ ಅಧ್ಯಕ್ಷರಾಗಿ ಎಚ್.ಆರ್. ಲೋಕೇಶ್, ಉಪಾಧ್ಯಕ್ಷರಾಗಿ ಯೋಗಣ್ಣ ಹೊಸಲಕ್ಕೇಗೌಡಕೊಪ್ಪಲು ಹಾಗೂ ಜಿಲ್ಲಾ ಹಿಂದುಳಿದ ವರ್ಗಗಳ ಪ್ರಧಾನ ಕಾರ್ಯದರ್ಶಿಯಾಗಿ ಆರ್. ಎಲ್. ಮಹದೇವ ಹಾಗೂ ಒಬಿಸಿ ಜಿಲ್ಲಾ ಕಾರ್ಯದರ್ಶಿಯಾಗಿ ಮಂಜು ಬೇಡಿಗನಹಳ್ಳಿ ಹಾಗೂ ಎ.ಜೆ. ಮೋಹನ್ ಅವರನ್ನು ನೇಮಕ ಮಾಡಿದೆ.

ಅರಕಲಗೂಡು ವಿಧಾನಸಭಾ ಕ್ಷೇತ್ರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಶ್ರೀಧರ್ ಗೌಡ ಮಾತನಾಡಿ, ಹಳ್ಳಿ ಮೈಸೂರು ಭಾಗದಲ್ಲಿ ಕಾಂಗ್ರೆಸ್ ಪಕ್ಷವು ಹೆಚ್ಚಿನ ಸಂಘಟನೆಯಾಗಬೇಕಿದೆ. ಈ ನಿಟ್ಟಿನಲ್ಲಿ ಎಲ್ಲಾ ಪದಾಧಿಕಾರಿಗಳು ಹೆಚ್ಚು ಕಾರ್ಯಪ್ರವೃತ್ತರಾಗಿ ಕೆಲಸ ಮಾಡಬೇಕು ಎಂದರು.

ಮುಖಂಡರಾದ ಮಲ್ಲಪ್ಪನಹಳ್ಳಿ ಮೋಹನ್, ನಾಗರಾಜ್ ಮಂಗಳಾಪುರ, ಅರಕಲಗೂಡು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸೋಮಶೇಖರ್, ಹಳ್ಳಿಮೈಸೂರು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ರಾಜೇಗೌಡ ಮತ್ತಿತರರಿದ್ದರು.

# ವಾಟೆಹೊಳೆ ಜಲಾಶಯಕ್ಕೆ ಬಾಗಿನ ಅರ್ಪಣೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಿರಂತರ ಮಳೆಯಿಂದ ಭರ್ತಿಯಾಗಿರುವ ಆಲೂರು ತಾಲ್ಲೂಕಿನ ವಾಟೆಹೊಳೆ ಜಲಾಶಯಕ್ಕೆ ಶಾಸಕ ಸಿಮೆಂಟ್ ಮಂಜು ಬಾಗಿನ ಅರ್ಪಿಸಿದರು.

ಈ ವೇಳೆ ಮಾತನಾಡಿದ ಅವರು, ಜನರ ಜೀವನಾಡಿಯಾಗಿರುವ ವಾಟೆಹೊಳೆ ಜಲಾಶಯ ಮಳೆಗಾಲಕ್ಕೂ ಮೊದಲೇ ಭರ್ತಿಯಾಗಿದ್ದು, ರೈತರಲ್ಲಿ ಸಂತಸ ತಂದಿದೆ ಎಂದರು. ಈ ಭಾಗದಲ್ಲಿ ಸುಮಾರು ಹದಿನೆಂಟು ಸಾವಿರ ಹೆಕ್ಟರ್ ಭೂ ಪ್ರದೇಶವಿದ್ದು ಎಲ್ಲರೂ ಮಧ್ಯಮ ವರ್ಗದ ರೈತಾಪಿ ಜನರು ಈ ವಾಟೆಹೊಳೆ ಜಲಾಶಯದ ನೀರನ್ನು ಬೇಸಿಗೆ ಕಾಲದಲ್ಲಿ ಅವಲಂಬಿಸಿದ್ದು ಕೃಷಿ ಮಾಡಲು ಅನುಕೂಲವಾಗುತ್ತದೆ. ವಾಟೆಹೊಳೆ ನಾಲೆಯು ಹದಗೆಟ್ಟು ಅವೈಜ್ಞಾನಿಕವಾಗಿರುವುದು ರೈತರಲ್ಲಿ ಅಸಮಾಧಾನ ಉಂಟುಮಾಡಿದೆ ಎಂದರು.

ನಾಲೆಯುಅವೈಜ್ಞಾನಿಕವಾಗಿರುವ ಕಾರಣದಿಂದ ನೀರನ್ನು ಬಿಟ್ಟಕೂಡಲೇ ನಾಲೆಯಲ್ಲಿ ಹರಿಯದೆ ಎಲ್ಲೆಂದರಲ್ಲಿ ನೀರು ಪೋಲಾಗುತ್ತಿರುವುದು ಗಮನಕ್ಕೆ ಬಂದಿದೆ. ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಿ ಅದನ್ನು ಸರಿಪಡಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು.

# ನಿವೃತ್ತ ಹವಾಲ್ದಾರ್ ರಮೇಶ್‌ಗೆ ಅದ್ದೂರಿ ಸ್ವಾಗತ



ಹಾಸನ: ಭಾರತೀಯ ಸೇನೆಯಲ್ಲಿ 22 ವರ್ಷಗಳ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾದ ಅರೆಕಲ್ಲು ಹೊಸಹಳ್ಳಿ ಗ್ರಾಮದ ಹೆಚ್.ಆರ್. ರಮೇಶ್ ಅವರನ್ನು ಆತ್ಮೀಯವಾಗಿ ಬರಮಾಡಿಕೊಳ್ಳಲಾಯಿತು. ಇವರು ಇತ್ತೀಚೆಗೆ ನಡೆದ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ನಗರದ ಡೇರಿ ವೃತ್ತದಲ್ಲಿ ಜಮಾಯಿಸಿದ ಗ್ರಾಮಸ್ಥರು ಹಾಗೂ ದೇಶಪ್ರೇಮಿಗಳು ಪಟಾಕಿ ಸಿಡಿಸಿ, ರಮೇಶ್ ಅವರಿಗೆ ಹೂವಿನ ಮಾಲೆ, ಮೈಸೂರು ಪೇಟ ಹಾಕಿ ಸ್ವಾಗತಿಸಿದರು. ತೆರೆದ ವಾಹನದಲ್ಲಿ ಮೆರವಣಿಗೆ ನಡೆಸಲಾಯಿತು.

ಹೆಚ್.ಆರ್. ರಮೇಶ್ ಮಾತನಾಡಿ, ದೇಶ ಕಾಯುವ ಸೈನಿಕರಿಗೆ ಭಾರತದಲ್ಲಿ ವಿಶೇಷ ಸ್ಥಾನಮಾನವಿದೆ. ಸೇವೆ ಪೂರ್ಣಗೊಳಿಸಿ ವಾಪಾಸ್ ಬಂದಾಗ ತವರೂರಿನ ಜನರು ತೋರಿರುವ ಪ್ರೀತಿಗೆ ಶರಣಾಗಿದ್ದೇನೆಂದರು.

ಯೋಧ ಎಂದು ಹೇಳಿಕೊಳ್ಳಲು ಹೆಮ್ಮೆಯಾಗುತ್ತದೆ. 22 ವರ್ಷಗಳ ಸೇವಾ ಅವಧಿಯಲ್ಲಿ ಸಾಕಷ್ಟು ಕಷ್ಟಗಳನ್ನು ಎದುರಿಸಿದ್ದೇನೆ. ಜಮ್ಮು ಕಾಶ್ಮೀರದಲ್ಲೂ ಸೇವೆ ಸಲ್ಲಿಸಿದ್ದೇನೆ. ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲೂ ಪಾಲ್ಗೊಂಡಿದ್ದೆ ಎಂದರು.

ನಿವೃತ್ತಿ ಅಂಚಿನಲ್ಲಿದ್ದಾಗ ಭಯೋತ್ಪಾದಕರ ವಿರುದ್ಧ ಹೋರಾಡಿದ ಹೆಮ್ಮೆ ನನಗಿದೆ. ದೇಶ ಸೇವೆ ಮಾಡುವ ಅವಕಾಶ ಎಲ್ಲರಿಗೂ ಸಿಗುವುದಿಲ್ಲ. ಈ ವಿಚಾರದಲ್ಲಿ ನಾನು ಅದೃಷ್ಟವಂತ ಎಂದು ಹೇಳಿದರು.

ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷ ಎ.ಎಸ್. ಪ್ರದೀಪ್ ಸಾಗರ್, ಕಾರ್ಯದರ್ಶಿ ಡಿ.ಈ. ಸ್ವಾಮಿ, ಮಾಜಿ ಅಧ್ಯಕ್ಷ ಸೋಮೇಶ್, ನಾಗರಾಜು ಹಾಗೂ ಇತರರಿದ್ದರು.

# ಬಾಲ್ಯ ವಿವಾಹ: ರಾಜ್ಯದಲ್ಲಿ ಜಿಲ್ಲೆಗೆ ಮೂರನೇ ಸ್ಥಾನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ರಾಜ್ಯದಲ್ಲಿಯೇ ಜಿಲ್ಲೆ ಬಾಲ್ಯ ವಿವಾಹ ಪ್ರಕರಣದಲ್ಲಿ ಮೂರನೇ ಸ್ಥಾನದಲ್ಲಿರುವ ಬಗ್ಗೆ ವರದಿಯಾಗಿದೆ. ಇದು ತುಂಬಾ ಆತಂಕದ ವಿಷಯವಾಗಿದ್ದು, ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಕಾನೂನು ಅರಿವು ಹೊಂದಬೇಕಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಬಿ.ಕೆ. ನಾಗೇಶಮೂರ್ತಿ ತಿಳಿಸಿದರು.

ಪಟ್ಟಣದ ಸಮಾಜ ಕಲ್ಯಾಣ ಇಲಾಖೆ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಕಾನೂನು ಸೇವೆಗಳ ಸಮಿತಿ ವತಿಯಿಂದ ಬಾಲ್ಯ ವಿವಾಹ ನಿಷೇಧ ಕಾನೂನು ಅರಿವು ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಅತಿ ಜರೂರಾಗಿ ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ಉಚ್ಚ ನ್ಯಾಯಾಲಯದ ಕಾನೂನು ಸೇವಾ ಪ್ರಾಧಿಕಾರದಿಂದ ನಿರ್ದೇಶನವಿದೆ. ಆ ಸಲುವಾಗಿ ಹೆಣ್ಣುಮಕ್ಕಳು ಓದುವ ಶಾಲಾ ಕಾಲೇಜುಗಳು, ವಸತಿ ನಿಲಯಗಳಲ್ಲಿ ಕಾನೂನು ತಿಳವಳಿಕೆ ನೀಡುವ ಕಾರ್ಯವನ್ನು ಕಾನೂನು ಸೇವಾ ಸಮಿತಿ ಆಯೋಜನೆ ಮಾಡಿ ಕಾನೂನು ತಿಳವಳಿಕೆ, ಅರಿವನ್ನು ಮೂಡಿಸಲಾಗುತ್ತಿದೆ ಎಂದು ಹೇಳಿದರು.




ಜನ ಸಾಮಾನ್ಯರೂ ಕೂಡ ಬಾಲ್ಯವಿವಾಹ ನಿಷೇಧದ ಕಾನೂನಿನ ಅರಿವು ಹೊಂದಬೇಕಿದೆ. ಪ್ರಮುಖವಾಗಿ ಮಕ್ಕಳ ಪೋಷಕರು ಹಾಗೂ ಅಪ್ರಾಪ್ತ ಬಾಲಕಿಯರು ಇಂತಹ ಕಾನೂನು ವಿರೋಧಿ ಬಾಲ್ಯವಿವಾಹವನ್ನು ತಡೆಯಲು ಮುಂದಾಗಬೇಕಿದೆ. ಮಕ್ಕಳ ಸಹಾಯವಾಣಿ ಕೂಡ ಇದೆ. ಈ ರೀತಿ ಬಾಲ್ಯ ವಿವಾಹ ನಡೆಯುವುದು ಕಂಡುಬಂದರೆ ಅಪ್ರಾಪ್ತ ಬಾಲಕಿ ಅಥವಾ ಸ್ಥಳೀಯರು ಕರೆ ಮಾಡಿ ತಿಳಿಸಿದರೇ ಅದನ್ನು ಆರಂಭದಲ್ಲಿಯೇ ತಡೆಗಟ್ಟಲು ಸಾಧ್ಯವಾಗುತ್ತದೆ ಎಂದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೆಂಕಟೇಶ್ ಮಾತನಾಡಿ, ಈ ಹಿಂದೆ ನಮ್ಮ ಪೂರ್ವಿಕರು ಬಾಲ್ಯ ವಿವಾಹಕ್ಕೆ ಒತ್ತು ನೀಡಿರುವ ಸಂದರ್ಭವಿತ್ತು. ಅದು ಅವರು ಸಾಯುವ ಮುನ್ನ ಮಕ್ಕಳ ಮದುವೆಮಾಡಿ ನೋಡುವ ಆಶಯದ ಆಲೋಚನೆಯನ್ನು ಹೊಂದಿದ್ದರು. ಅದು ಒಂದು ರಿತೀಯಲ್ಲಿನ ಬಡತನ, ಶೈಕ್ಷಣಿಕ ತಿಳವಳಿಕೆ ಇಲ್ಲದೆ ನಡೆಯುತ್ತಿತ್ತು. ಆದರೆ ಈಗ ಕಾನೂನು ಬಂದಿದೆ. ಇದನ್ನು ಯಾರೂ ಕೂಡ ಯಾವುದೇ ಸಂದರ್ಭದಲ್ಲಿಯೂ ಉಲ್ಲಂಘನೆ ಮಾಡುವಂತ್ತಿಲ್ಲ. ವಿದ್ಯಾರ್ಥಿಗಳು ಓದುವ ಪಠ್ಯದಲ್ಲಿಯು ಸಹ ಕಾನೂನಿನ ತಿಳವಳಿಕೆ, ಸಾಮಾಜಿಕ ಬದ್ಧತೆ ಹಾಗೂ ಎಷ್ಟು ವಯಸ್ಸಿಗೆ ವಿವಾಹ ಮಾಡಿಕೊಳ್ಳಬೇಕೆಂಬ ವಿಷಯಗಳು ಇವೆ. ಕೆಲವು ಸಂದರ್ಭದಲ್ಲಿ ವಿದ್ಯಾವಂತರು, ಹಠಕ್ಕೆ ಬಿದ್ದು 18 ವರ್ಷ ತುಂಬದೇ ಇರುವ ಮಕ್ಕಳಿಗೆ ಮದುವೆ ಮಾಡುವ ಸಂದರ್ಭಗಳನ್ನು ಅವರೇ ಸ್ವಯಂ ಪ್ರೇರಿತವಾಗಿ ತಂದುಕೊಳ್ಳುತ್ತಿದ್ದಾರೆ. ಇದು ಸಮಾಜದಲ್ಲಿ ದೊಡ್ಡ ಪರಿಣಾಮ ಬೀರಲಿದೆ. ಪ್ರಮುಖವಾಗಿ ಅಪ್ರಾಪ್ತ ಮಕ್ಕಳ ಆರೋಗ್ಯದ ಮೇಲೆಯೂ ಸಹ ಕೆಟ್ಟ ಪರಿಣಾಮ ಬೀರಿ ಸಾವು ನೋವು ಕೂಡ ಸಂಭವಿಸುವ ಸಾಧ್ಯತೆ ಇದೆ. ಇಂತಹ ಕಾನೂನು ವಿರೋಧಿ ಬಾಲ್ಯ ವಿವಾಹಕ್ಕೆ ಯಾರೂ ಕೂಡ ಒತ್ತುಕೊಡಬಾರದು. ಇಲ್ಲಿನ ವಿದ್ಯಾರ್ಥಿ ನಿಲಯದಲ್ಲಿನ ಹೆಣ್ಣು ಮಕ್ಕಳು ಈ ಬಗ್ಗೆ ಅರಿವು ಹೊಂದಿ ಪೋಷಕರು, ಗ್ರಾಮಗಳಲ್ಲಿನ ಜನರಿಗೆ ತಿಳವಳಿಕೆ ನೀಡಬೇಕಿದೆ. ಇದು ಸಹಕಾರಗೊಂಡರೇ ಮೂರನೇ ಸ್ಥಾನದಲ್ಲಿರುವ ಹಾಸನ ಜಿಲ್ಲೆಯಲ್ಲಿನ ಬಾಲ್ಯ ವಿವಾಹ ಅನಿಷ್ಟ ಪದ್ಧತಿಯನ್ನು ಕಿತ್ತೊಗೆದು ಮುಕ್ತಗೊಳಿಸಬಹುದಾಗಿದೆ. ಇದು ವಿದ್ಯಾರ್ಥಿನಿಯರಿಂದ ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಿವಿಲ್ ಜಡ್ಜ್ ಚಂಪಾಶ್ರೀ ಮಾತನಾಡಿದರು. ವಕೀಲರ ಸಂಘದ ಕಾರ್ಯದರ್ಶಿ ಶ್ರೀಧರ್, ನಿಲಯ ಪಾಲಕರಾದ ಶರ್ಮಿಳಾ, ಉಮೇಶ್ ಇತರರು ಉಪಸ್ಥಿತರಿದ್ದರು.

# ವಿದ್ಯುತ್ ಸ್ಪರ್ಶದಿಂದ ವ್ಯಕ್ತಿ ಸಾವು

ಕೊಣನೂರು: ಮನೆ ಮುಂದೆ ಬಟ್ಟೆ ಒಣ ಹಾಕುವಾಗ ವಿದ್ಯುತ್ ಸ್ಪರ್ಶವಾಗಿ ವ್ಯಕ್ತಿ ಮೃತಪಟ್ಟಿರುವ ಘಟನೆ ಹಂಪಾಪುರ ಗ್ರಾಮದಲ್ಲಿ ಶುಕ್ರವಾರ ನಡೆದಿದೆ.

ಗ್ರಾಮದ ರಾಜಪ್ಪ (38) ಮೃತರು. ಬೆಳಿಗ್ಗೆ ಮನೆ ಹತ್ತಿರ ಬಟ್ಟೆ ಒಣಗಿಸಲು ತಂತಿ ಮೇಲೆ ಹಾಕುತ್ತಿದ್ದಾಗ ಏಕಾಏಕಿ ವಿದ್ಯುತ್ ಪ್ರವಹಿಸಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಜುಲೈ-05

1975: ಭಾರತದಲ್ಲಿ ತುರ್ತು ಪರಿಸ್ಥಿತಿ ಜಾರಿಯ ಬಳಿಕ ಮೊದಲ ಬಾರಿಗೆ ಪ್ರಮುಖ ಪ್ರತಿಭಟನೆಗಳು ನಡೆದವು. ಹಲವಾರು ವಿರೋಧ ಪಕ್ಷದ ನಾಯಕರು ಬಂಧನಕ್ಕೆ ಒಳಗಾದರು.

2004: ಮನ್‌ಮೋಹನ್ ಸಿಂಗ್ ನೇತೃತ್ವದ ಯುಪಿಎ ಸರ್ಕಾರವು ತನ್ನ ಮೊದಲ ಬಜೆಟ್ ಮಂಡಿಸಿತು.

1811: ವೆನೆಜುವೆಲಾ ಸ್ಪೇನ್‌ನಿಂದ ತನ್ನ ಸ್ವಾತಂತ್ರ್ಯವನ್ನು ಘೋಷಿಸಿತು. ಇದು ಲ್ಯಾಟಿನ್ ಅಮೆರಿಕದ ಸ್ವಾತಂತ್ರ್ಯ ಹೋರಾಟದಲ್ಲಿ ಮಹತ್ವದ ಘಟ್ಟ.

1946: ಬಿಕಿನಿ ಅಟೋಲ್‌ನಲ್ಲಿ ಅಮೆರಿಕ ತನ್ನ ಎರಡನೇ ಅಣುಬಾಂಬ್ ಪ್ರಯೋಗ ನಡೆಸಿತು. ಇದು ಆಪರೇಷನ್ ಕ್ರಾಸ್‌ರೋಡ್ಸ್ ಭಾಗವಾಗಿತ್ತು.

1954: ಬಿಬಿಸಿ ತನ್ನ ಮೊದಲ ಟೆಲಿವಿಷನ್ ನ್ಯೂಸ್ ಬುಲೆಟಿನ್ ಅನ್ನು ಪ್ರಸಾರ ಮಾಡಿತು.

1996: ಡೊಳ್ಳಿ ಹೆಸರಿನ ಮೊದಲ ಕ್ಲೋನ್ ಮಾಡಿದ ಕುರಿ ಜನಿಸಲಾಯಿತು. ಇದು ವಿಜ್ಞಾನ ಜಗತ್ತಿನಲ್ಲಿ ಕ್ರಾಂತಿಕಾರಿ ಸಾಧನೆ.

### ಜನನ

1810: ಫಿನ್ಲೆಂಡಿನ ಖ್ಯಾತ ಕವಯಿತ್ರಿ ಮತ್ತು ಲೇಖಕಿ ಫ್ರೆಡ್ರಿಕಾ ರುನೆಬರ್ಗ್ ಜನಿಸಿದರು.

1995: ಪಿಯರೆ ಎಮೆರಿಕ್ ಒಬಮೆಯಾಂಗ್, ಗ್ಯಾಬೋನ್‌ನ ಖ್ಯಾತ ಫುಟ್ಬಾಲ್ ಆಟಗಾರ.

### ಮರಣ

1826: ಥೋಮಸ್ ಸ್ಟ್ಯಾಮ್‌ಫರ್ಡ್ ರಾಫಲ್ಸ್, ಸಿಂಗಾಪುರದ ಸ್ಥಾಪಕ ಎಂದು ಪರಿಗಣಿಸಲ್ಪಡುವ ಬ್ರಿಟಿಷ್ ಅಧಿಕಾರಿ.

2020: ಐಸಿಬಿ ಮಾಜಿ ಅಧ್ಯಕ್ಷ ಮಲ್ಕೋಮ್ ನ್ಯಾಶ್.

# ವಿದ್ಯುತ್ ಪರಿವರ್ತಕ ಸುತ್ತ ತಂತಿ ಬೇಲಿ ಅಳವಡಿಸಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪೆನ್ಷನ್ ಮೊಹಲ್ಲಾ ಸರ್ಕಾರಿ ಶಾಲೆ ಪಕ್ಕದಲ್ಲಿರುವ ವಿದ್ಯುತ್ ಪರಿವರ್ತಕ (ಟಿಸಿ) ಅಪಾಯಕ್ಕೆ ಆಹ್ವಾನ ನೀಡುತ್ತಿದ್ದು ಸುತ್ತಲೂ ತಂತಿ ಬೇಲಿ ಹಾಕಿ ಅವಘಡ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕೆಂದು ಎಸ್‌ಡಿಪಿಐ ಆಗ್ರಹಿಸಿದೆ.

ಎಸ್‌ಡಿಪಿಐ ಸ್ಥಳೀಯ ಘಟಕದ ಸದಸ್ಯ ಫೈರೋಜ್ ಪಾಷ ಮಾತನಾಡಿ, ಹೈವೋಲ್ಟೇಜ್ ಟಿಸಿ ಇದಾಗಿದ್ದು, ಪಕ್ಕದಲ್ಲೇ ಸರ್ಕಾರಿ ಶಾಲೆಯಿದೆ. ನಿತ್ಯ ನೂರಾರು ಮಕ್ಕಳು ಹಾಗೂ ಸಾರ್ವಜನಿಕರು ಪಕ್ಕದಲ್ಲೇ ನಡೆದುಕೊಂಡು ಹೋಗುತ್ತಾರೆ. ವಿದ್ಯುತ್ ತಂತಿಗಳು ಮತ್ತು ಕಂಬಗಳು ಅಪಾಯಕ್ಕೆ ಆಹ್ವಾನ ನೀಡುತ್ತಿವೆ ಎಂದರು.

ಮಳೆಗಾಲವಾದ್ದರಿಂದ ವಿದ್ಯುತ್ ಪ್ರವಹಿಸುವ ಸಾಧ್ಯತೆ ಹೆಚ್ಚಿದೆ. ಜೋರು ಗಾಳಿಗೆ ತಂತಿಗಳು ನೇತಾಡುತ್ತವೆ. ಹೀಗಾಗಿ ರಸ್ತೆಯಲ್ಲಿ ಸಂಚರಿಸುವುದು ದುಸ್ತರವಾಗಿದೆ. ಬೈಕ್ ಸವಾರರು, ಪಾದಚಾರಿಗಳು ಜೀವಭಯದಲ್ಲೇ ಓಡಾಡುತ್ತಿದ್ದಾರೆ. ಟಿಸಿ ಸುತ್ತಲೂ ಗಿಡಗಂಟಿ ಬೆಳೆದಿದ್ದು ಮಹಾನಗರ ಪಾಲಿಕೆ ಹಾಗು ಸೆಸ್ಕಾಂ ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು. ಟಿಸಿ ಸುತ್ತಲೂ ತಂತಿ ಬೇಲಿ ಹಾಕಿದರೆ ಅದರ ಸಮೀಪ ಓಡಾಡುವುದನ್ನು ತಪ್ಪಿಸಬಹುದೆಂದರು.

ಎಸ್‌ಡಿಪಿಐ ವಾರ್ಡ್ ಅಧ್ಯಕ್ಷ ಫಾರಿಜ್, ಇರ್ಫಾನ್, ಅವೆಜ್, ಸಲೀಮ್, ಗುಲಾಬ್, ಶಾದಬ್, ನಿಸಾರ್ ಅಹಮದ್, ಫಾರೂಕ್ ಮತ್ತಿತರರಿದ್ದರು.

# ಕೆ.ಬಿ. ಬಸವರಾಜುಗೆ ಬೀಳ್ಕೊಡುಗೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ವಯೋ ನಿವೃತ್ತಿ ಹೊಂದಿದ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ (ಹೆಚ್‌ಡಿಸಿಸಿ) ವ್ಯವಸ್ಥಾಪಕ ಕೆ.ಬಿ. ಬಸವರಾಜು ಅವರಿಗೆ ಆತ್ಮೀಯ ಬೀಳ್ಕೊಡುಗೆ ನೀಡಲಾಯಿತು.



ಪಟ್ಟಣದ ಆರ್ಯ ಈಡಿಗರ ಸಮುದಾಯ ಭವನದಲ್ಲಿ ಹೋಬಳಿ ವ್ಯಾಪ್ತಿಯ ಸಹಕಾರ ಸಂಘ, ಮಹಿಳಾ ಸ್ವಸಹಾಯ ಸಂಘ ಮತ್ತು ಗ್ರಾಹಕರು ಆಯೋಜಿಸಿದ್ದ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಜಿಲ್ಲಾ ಸಹಕಾರ ಬ್ಯಾಂಕ್ ನಿರ್ದೇಶಕ ಹೊನ್ನವಳ್ಳಿ ಸತೀಶ್ ಮಾತನಾಡಿ, ಜಿಲ್ಲಾ ಸಹಕಾರ ಬ್ಯಾಂಕ್‌ನೊದಿಗೆ ವಿಶ್ವಾಸ ಉಳಿಸಿಕೊಂಡಿದ್ದ ಬಸವರಾಜು ಅನೇಕ ವರ್ಷಗಳ ಕಾಲ ಕೊಣನೂರಿನ ಹೆಚ್‌ಡಿಸಿಸಿ ಬ್ಯಾಂಕ್ ಶಾಖೆಯನ್ನು ಮುನ್ನಡೆಸಿದ್ದಾರೆಂದರು.

ಹಾರಗಿ ಮಹಾಮಂಡಳ ಅಧ್ಯಕ್ಷ ಎಸ್.ಸಿ. ಚೌಡೇಗೌಡ ಮಾತನಾಡಿ, ಬಸವರಾಜು ಗ್ರಾಹಕರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದರು. ಸ್ಥಳೀಯ ಸಹಕಾರ ಸಂಘಗಳ ವ್ಯವಹಾರವು ಸುಲಭ ಮತ್ತು ಶೀಘ್ರವಾಗಿ ನಡೆಯಲು ಸಹಕರಿಸುತ್ತಿದ್ದರೆಂದರು.

ಕೊಣನೂರು ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಸ್.ಕೆ. ಕೃಷ್ಣ ಮಾತನಾಡಿ, ಬಸವರಾಜು ವ್ಯವಸ್ಥಾಪಕರಷ್ಟೇ ಅಲ್ಲದೆ ಸಹಕಾರ ನಿಯಮಗಳನ್ನು ಚೆನ್ನಾಗಿ ಅರಿತಿದ್ದರು. ಸಂಘಗಳಿಗೆ ಅಗತ್ಯ ಸಲಹೆ ನೀಡುತ್ತಾ, ಸಂಘ ಬೆಳವಣಿಗೆಗೆ ತಮ್ಮದೇಯಾದ ಕೊಡುಗೆ ನೀಡಿದ್ದಾರೆಂದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಹೆಚ್.ಎಸ್. ಶಂಕರ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಬಿ. ರಮೇಶ್, ಬಿವಿಎಂ ಬಾಲಿಕಾ ಶಾಲೆಯ ಕಾರ್ಯದರ್ಶಿ ಚಂದ್ರಣ್ಣ ಮತ್ತಿತರರಿದ್ದರು.

# ಕೇಂದ್ರ ಸ್ಥಾನದಲ್ಲಿರಲು ತಹಶೀಲ್ದಾರ್‌ಗಳಿಗೆ ಸೂಚನೆ

ಹಾಸನ: ಜಿಲ್ಲೆಯ ಎಲ್ಲಾ ತಹಶೀಲ್ದಾರ್‌ಗಳು ಕೇಂದ್ರ ಸ್ಥಾನದಲ್ಲಿಯೇ ಇದ್ದು ಯಾವುದೇ ದೂರುಗಳು ಬರದಂತೆ ನಿಗಾವಹಿಸಿ ಕರ್ತವ್ಯ ನಿರ್ವಹಿಸಲು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿ, ಕೆಲವು ಕಡೆ ಗಮನಿಸಿದಾಗ ವೃದ್ಧಾಪ್ಯ ಮತ್ತು ವಿಧವಾ ಪಿಂಚಣಿ ಬರುವುದು ನಿಂತಿದೆ ಎಂದು ಕೇಳಿಬಂದಿದೆ. ಅದರ ಬಗ್ಗೆ ಹೆಚ್ಚಿನ ಗಮನಹರಿಸಿ ಪರಿಶೀಲನೆ ಮಾಡಿ ಸರಿಪಡಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಪೌತಿ ಆಂದೋಲನ ನಡೆಸುವುದರ ಜೊತೆಗೆ ದರಖಾಸ್ತು ಪೋಡಿಗೆ ಒತ್ತು ನೀಡಿ ಎಂದರಲ್ಲದೆ, ಆರ್‌ಟಿಸಿ ತಿದ್ದುಪಡಿ, ಇ-ಸ್ವತ್ತು ಬಾಕಿ ಇರುವುದನ್ನು ಪೂರ್ಣಗೊಳಿಸಲು ನಿರ್ದೇಶನ ನೀಡಿದರು.

ಗ್ರಾಮ ಆಡಳಿತ ಅಧಿಕಾರಿಗಳಿಗೆ ಕಚೇರಿಗೆ ಸ್ಥಳಾವಕಾಶ ಕಲ್ಪಿಸುವುದರ ಜೊತೆಗೆ ಇ-ಆಫಿಸ್‌ನಲ್ಲಿ ಗ್ರಾಮ ಆಡಳಿತಾಧಿಕಾರಿಗಳು ಕಾರ್ಯನಿರ್ವಹಿಸಲು ಕ್ರಮ ವಹಿಸುವಂತೆ ತಿಳಿಸಿದರು.

# ಭೂ ಮಾಲೀಕರಿಂದ ಅರ್ಜಿ ಆಹ್ವಾನ

ಹಾಸನ: ರಾಷ್ಟ್ರೀಯ ಹೆದ್ದಾರಿ-373 ಚಿಕ್ಕಮಗಳೂರು-ಬಿಳಿಕೆರೆ ರಸ್ತೆಯ ಕಿ.ಮೀ. 27.780 ರಿಂದ ಕಿ.ಮೀ 57.320 ರವರೆಗೆ (ಬೇಲೂರು ತಾಲ್ಲೂಕಿನ ಮುದಿಗೆರೆಯಿಂದ ಹಾಸನ ನಗರದ ತಣ್ಣೀರುಹಳ್ಳ ವೃತ್ತದವರೆಗೆ) ಚತುಷ್ಪಥ ರಸ್ತೆ ಅಭಿವೃದ್ಧಿ (ಪ್ಯಾಕೇಜ್-2). (ಜಾಬ್ ನಂ.ಎನ್.ಹೆಚ್373-ಕೆಎನ್‌ಟಿ-2022-23-988) ಕಾಮಗಾರಿಗೆ ಸಂಬಂಧಿಸಿದಂತೆ ಭೂಸ್ವಾಧೀನಕ್ಕೆ ಒಳಪಡುವ ಜಮೀನುಗಳ ಮಾಲೀಕರಿಗೆ 3ಜಿ ಅವಾರ್ಡ್ ನೋಟಿಸ್ ನೀಡಲಾಗಿದೆ.

3ಜಿ ಅವಾರ್ಡ್ ನೋಟಿಸ್‌ಗಳಲ್ಲಿ ನಮೂದಿಸಿರುವ ದಾಖಲೆಗಳನ್ನು ವಿಶೇಷ ಭೂಸ್ವಾಧೀನಾಧಿಕಾರಿಗೆ ಸಲ್ಲಿಸಿದ ತರುವಾಯ ಪರಿಹಾರ ಮೊತ್ತವನ್ನು ಸಂದಾಯ ಮಾಡಲಾಗುತ್ತದೆ. ಈ ವರೆಗೂ ದಾಖಲೆಗಳನ್ನು ಸಲ್ಲಿಸದೇ ಇರುವ ಭೂಮಾಲೀಕರು ಜು. 11ರ ಒಳಗಾಗಿ ಅವಶ್ಯ ದಾಖಲೆಗಳನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು, ರಾಷ್ಟ್ರೀಯ ಹೆದ್ದಾರಿ ಉಪವಿಭಾಗ, ಎಂ.ಜಿ.ರಸ್ತೆ, ಹಾಸನ ಅಥವಾ ವಿಶೇಷ ಭೂಸ್ವಾಧೀನಾಧಿಕಾರಿ ಮತ್ತು ಸಕ್ಷಮ ಪ್ರಾಧಿಕಾರ, ರಾಷ್ಟ್ರೀಯ ಹೆದ್ದಾರಿಗಳು, ಲೋಕೋಪಯೋಗಿ ಇಲಾಖೆಯ ಆವರಣ, ಕೆ.ಆರ್. ಸರ್ಕಲ್, ಬೆಂಗಳೂರು ಇವರಕಚೇರಿಯಲ್ಲಿ ಸಲ್ಲಿಸಲುರಾಷ್ಟ್ರೀಯ ಹೆದ್ದಾರಿ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

# ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿಆಹ್ವಾನ

ಹಾಸನ: ಜಿಲ್ಲೆಯಲ್ಲಿ 2025-26ನೇ ಸಾಲಿನ ಆತ್ಮ ಯೋಜನೆಯಡಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಸಮಗ್ರ ಬೆಳೆ ಪದ್ಧತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ಆಧುನಿಕ ಯಂತ್ರೋಪಕರಣ ಬಳಕೆ, ತೋಟಗಾರಿಕೆ, ಹೈನುಗಾರಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ ಬೇಸಾಯ, ಹಸಿರು ಮನೆ ಅಳವಡಿಕೆ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಆಡು, ಕುರಿ, ಮೊಲ ಸಾಕಾಣಿಕೆ ಇತ್ಯಾದಿ ಕೃಷಿ ಚಟುವಟಿಕೆಗಳಲ್ಲಿ ಸಾಧನೆ ಮಾಡಿದವರು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ರೈತರು ಮತ್ತು ರೈತ ಮಹಿಳೆಯರು ಅರ್ಜಿಗಳನ್ನು ಹತ್ತಿರದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗಳಿಂದ ಪಡೆದು ಜು. 31ರ ಒಳಗೆ ಸಂಬಂಧಿತ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಈಗಾಗಲೇ ಪ್ರಶಸ್ತಿ ಪಡೆದ ರೈತರು ಪುನಃ ಅರ್ಜಿ ಸಲ್ಲಿಸುವಂತಿಲ್ಲ. ಮಾಹಿತಿಗಾಗಿ ಹಾಸನ ಜಿಲ್ಲೆಯ ಎಲ್ಲಾ ಸಹಾಯಕ ಕೃಷಿ ನಿರ್ದೇಶಕರು ಹಾಗೂ ರೈತ ಸಂಪರ್ಕ ಕೇಂದ್ರದ ಅಧಿಕಾರಿ ಸಂಪರ್ಕಿಸಬಹುದು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248